**Akashvani : Bangalore**
**National Bulletin In Kannada**
**24.03.2025 / 13.10 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**24.03.2025 / 13.10 hrs**

**<><*<><>*><>**

ಮುಖ್ಯಾಂಶಗಳು

೧. ಸಂಸತ್ತಿನ ಉಭಯ ಸದನಗಳಲ್ಲಿ ಕರ್ನಾಟಕ ಅಲ್ಪ ಸಂಖ್ಯಾತರ ಮೀಸಲಾತಿ ವಿಚಾರದಲ್ಲಿ ಗದ್ದಲ ; ಕಲಾಪ ೨ ಗಂಟೆಗೆ ಮುಂದೂಡಿಕೆ

೨. ಛತ್ತೀಸ್‌ಗಢ ವಿಧಾನಸಭೆಯ ರಜತ ಮಹೋತ್ಸವದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಗಿ

೩. ವಿಶ್ವಕ್ಷಯರೋಗ ದಿನದಂದು ಟಿಬಿ ನಿರ್ಮೂಲನೆ ಎಡೆಗೆ ತಮ್ಮ ಬದ್ಧತೆ ಪುನರುಚ್ಚರಿಸಿದ ಕೇಂದ್ರ ಸಚಿವ ಜೆ.ಪಿ. ನಡ್ಡಾ

೪. ಐಪಿಎಲ್ ಟಿ-೨೦ ಕ್ರಿಕೆಟ್ ; ವಿಶಾಖಪಟ್ಟಣಂನಲ್ಲಿಂದು ಡೆಲ್ಲಿ ಕ್ಯಾಪಿಟಲ್ಸ್-ಲಖನೌ ಸೂಪರ್ ಜೈಂಟ್ಸ್ ಮುಖಾಮುಖಿ

**<><*<><>*><>**

ಕರ್ನಾಟಕದಲ್ಲಿ ಸಾರ್ವಜನಿಕ ಗುತ್ತಿಗೆಗಳಲ್ಲಿ ನಿರ್ದಿಷ್ಟ ಅಲ್ಪ ಸಂಖ್ಯಾತ ಗುಂಪಿಗೆ ಮೀಸಲಾತಿ ನೀಡುವ ವಿಷಯ ಮತ್ತು ಈ ಮೀಸಲಾತಿಗೆ ಸಂವಿಧಾನದಲ್ಲಿ ಬದಲಾವಣೆ ತರುವಂತಹ ಕರ್ನಾಟಕ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿಕೆ ಸಂಬಂಧಿಸಿದಂತೆ ಸಂಸತ್ತಿನ ಉಭಯ ಸದನಗಳಲ್ಲಿಂದು ಬಿಜೆಪಿ ಸಂಸದರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಇದರ ಪರಿಣಾಮ ಗದ್ದಲ ಉಂಟಾಗಿ ರಾಜ್ಯಸಭೆ ಹಾಗೂ ಲೋಕಸಭೆಯನ್ನು ೨ ಗಂಟೆಯವರೆಗೆ ಮುಂದೂಡಲಾಗಿದೆ. ಇಂದು ಬೆಳಗ್ಗೆ ರಾಜ್ಯಸಭೆ ಸದನ ಸೇರಿದಾಗ ಆಡಳಿತ ಪಕ್ಷದ ಸದಸ್ಯರು ಈ ವಿಷಯ ಕುರಿತಂತೆ ಪ್ರತಿಭಟನೆ ಆರಂಭಿಸಿದರು. ಸಂವಿಧಾನ ಬದಲಾವಣೆ ಕುರಿತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಹೇಳಿಕೆಯನ್ನು ಉಲ್ಲೇಖಿಸಿ ಮಾತನಾಡಿದ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ನಿರ್ದಿಷ್ಟ ಅಲ್ಪ ಸಂಖ್ಯಾತ ಗುಂಪಿಗೆ ಮೀಸಲಾತಿ ತರುವ ಮೂಲಕ ಕಾಂಗ್ರೆಸ್, ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಸಂವಿಧಾನದ ಘನತೆಯನ್ನು ಕುಗ್ಗಿಸಿದೆ ಎಂದು

ಆರೋಪಿಸಿ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ಆಗ್ರಹಿಸಿದರು.

ಧ್ವನಿ: ಕಿರಣ್ ರಿಜಿಜು

ಸಭಾ ನಾಯಕ ಜೆ.ಪಿ. ನಡ್ಡಾ, ಕಾಂಗ್ರೆಸ್ ಇಂತಹ ಕ್ರಮಗಳ ಮೂಲಕ ಸಂವಿಧಾನ ದುರ್ಬಲಗೊಳಿಸುತ್ತಿದೆ. ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ದೇಶದಲ್ಲಿ ಧರ್ಮಾಧಾರಿತ ಮೀಸಲಾತಿಯನ್ನು ವಿರೋಧಿಸಿದ್ದರು. ಇದಕ್ಕೆ ಪ್ರತಿಕ್ರಿಯಿಸಿದ ವಿರೋಧಪಕ್ಷದ ನಾಯಕ ಮಲ್ಲಿಕಾರ್ಜುನ್ ಖರ್ಗೆ ಮೀಸಲಾತಿಯನ್ನು ಯಾರೂ ಕೊನೆಗೊಳಿಸಲು ಅಥವಾ ಸಂವಿಧಾನವನ್ನು ಬದಲಾಯಿಸಲು ಸಾಧ್ಯವಿಲ್ಲ ಎಂದರು. ಬಳಿಕ ಆಡಳಿತ ಹಾಗೂ ವಿರೋಧ ಪಕ್ಷಗಳ ನಡುವೆ ಗದ್ದಲ ಉಂಟಾಗಿ ಸದನವನ್ನು ಮುಂದೂಡಲಾಯಿತು. ಲೋಕಸಭೆಯಲ್ಲೂ ಸದನ ಸಭೆ ಸೇರಿದಾಗ ಆಡಳಿತ ಪಕ್ಷದ ಸದಸ್ಯರು ಇದೇ ವಿಷಯದ ಮೇಲೆ ಅಸಮಾಧಾನ ವ್ಯಕ್ತಪಡಿಸಿ ಗದ್ದಲದ ವಾತಾವರಣ ಸೃಷ್ಟಿಸಿದರು. ಇದೇ ವೇಳೆ ಉತ್ತರಪ್ರದೇಶದಲ್ಲಿ ಮಹಿಳೆಯರ ವಿರುದ್ಧದ ಅಪರಾಧಗಳನ್ನು ಎತ್ತಿ ತೋರಿಸುವ ಫಲಕಗಳನ್ನು ಸಮಾಜವಾದಿ ಪಕ್ಷದ ಸದಸ್ಯರು ಪ್ರದರ್ಶಿಸಿ ಪ್ರತಿಭಟಿಸಿದರು. ಈ ನಡೆಯನ್ನು ಲೋಕ ಸಭಾಧ್ಯಕ್ಷ ಓಂಬಿರ್ಲಾ ಆಕ್ಷೇಪ ವ್ಯಕ್ತಪಡಿಸಿ ಇದು ಕೆಳಮನೆಯ ನಿಯಮ ಮತ್ತು ಸಭ್ಯತೆಗೆ ವಿರುದ್ಧವಾಗಿದೆ ಎಂದು ಹೇಳಿದರು. ಉಭಯ ಪಕ್ಷದವರಿಗೂ ಸದನ ಸುಗಮವಾಗಿ ನಡೆಸಲು ಅನುವು ಮಾಡಿಕೊಡಲು ಲೋಕಸಭಾಧ್ಯಕ್ಷ ಓಂಬಿರ್ಲಾ, ಮನವಿ ಮಾಡಿದರು. ಗದ್ದಲದ ವಾತಾವರಣದ ಮುಂದುವರೆದ ಬೆನ್ನಲ್ಲೆ ಸದನವನ್ನು ಮುಂದೂಡಲಾಯಿತು.

<><*<><>*><>

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಛತ್ತೀಸ್‌ಗಢ ಪ್ರವಾಸ ಕೈಗೊಂಡಿದ್ದು, ರಾಯ್‌ಪುರದಲ್ಲಿ ಛತ್ತೀಸ್‌ಗಢ ವಿಧಾನಸಭೆಯ ರಜತ ಮಹೋತ್ಸವದಲ್ಲಿ ಭಾಗವಹಿಸಿದರು. ಈ ವೇಳೆ ಮಾತನಾಡಿದ ಅವರು, ಸಾಮಾಜಿಕ ಸಾಮರಸದ ಮೇಲೆ ಆಧರಿತ ಸ್ವಸ್ಥ ಸಮಾಜದ ನಿರ್ಮಾಣಕ್ಕೆ ಸದಸ್ಯರೆಲ್ಲರಿಗೂ ಕರೆ ನೀಡಿದರು. ರಾಜ್ಯದ ವಿಧಾನಸಭೆ ರಾಜ್ಯವನ್ನು ಅಭಿವೃದ್ಧಿಯ ಪಥದಲ್ಲಿ ಮುನ್ನಡೆಸಿ ಸರ್ವತೋಮುಖ ಬೆಳವಣಿಗೆಗೆ ಸೂಕ್ತ ಮಾರ್ಗಗಳನ್ನು ಅನ್ವೇಷಿಸುವಲ್ಲಿ ಸಫಲವಾಗಲಿದೆ ಎಂಬ ಭರವಸೆ ವ್ಯಕ್ತಪಡಿಸಿದರು. ನಕ್ಸಲರಿಂದ ಪೀಡಿತ ಜನರನ್ನು ಮುಖ್ಯವಾಹಿನಿಗೆ ತರುವ ಕಾರ್ಯ ಅಂತಿಮ ಹಂತದಲ್ಲಿದೆ. ಛತ್ತೀಸ್‌ಗಢದ ನಕ್ಸಲ್ ಪೀಡಿತ ಪ್ರದೇಶಗಳ ಜನರು ಅಭಿವೃದ್ಧಿಯ ಪಥದಲ್ಲಿ ಮುನ್ನಡೆಯಲು ಬಯಸುತ್ತಾರೆ ಎಂದ ರಾಷ್ಟ್ರಪತಿಯವರು ಛತ್ತೀಸ್‌ಗಢವನ್ನು

ಭಯೋತ್ಪಾದನೆಯಿಂದ ಮುಕ್ತವಾಗಿಸಲು ಸದಸ್ಯರೆಲ್ಲರೂ ಶೀಘ್ರವೇ ಕಾರ್ಯಪ್ರವೃತ್ತರಾಗುತ್ತಾರೆ ಎಂಬ ಭರವಸೆ ವ್ಯಕ್ತಪಡಿಸಿದರು.

ಧ್ವನಿ : ರಾಷ್ಟ್ರಪತಿ ( ೨೭ ಸೆಕೆಂಡ್‌ಗಳು )

ಬಳಿಕ ಅವರು ಒಡಿಶಾಗೆ ಭೇಟಿ ನೀಡಲಿದ್ದು, ನಯಾಗಢದಲ್ಲಿ ನಡೆಯಲಿರುವ ಭಾರತೀಯ ಬಿಸ್ವಬಸು ಶಬರ್ ಸಮಾಜದ ಸಂಸ್ಥಾಪನಾ ದಿನಾಚರಣೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

<><*<><>*><>

ದೇಶಾದ್ಯಂತ ಇಂದು ವಿಶ್ವ ಕ್ಷಯರೋಗ ದಿನ ಆಚರಣೆ ಮಾಡಲಾಗುತ್ತಿದೆ. ಕ್ಷಯರೋಗ ಕುರಿತು ಜಾಗೃತಿ ಮೂಡಿಸಲು, ಹಾಗೂ ಕ್ಷಯರೋಗ ಮುಕ್ತ ಸಮಾಜ ನಿರ್ಮಾಣ ಮಾಡಲು ಪ್ರತಿವರ್ಷ ಮಾರ್ಚ್ ೨೪ರಂದು ವಿಶ್ವಕ್ಷಯರೋಗ ದಿನವನ್ನು ಆಚರಿಸಲಾಗುತ್ತದೆ. ಡಾ. ರಾಬರ್ಟ್ ಕೋಚ್ ಅವರು ಟಿಬಿ ಬ್ಯಾಕ್ಟೀರಿಯಾವನ್ನು ಕಂಡುಹಿಡಿದ ವಾರ್ಷಿಕೋತ್ಸವದ ಸ್ಮರಣಾರ್ಥ ಈ ದಿನವನ್ನು ಆಚರಿಸಲಾಗುತ್ತದೆ. "ಹೌದು! ನಾವು ಕ್ಷಯರೋವನ್ನು ಕೊನೆಗೊಳಿಸಬಹುದು: ಬದ್ಧರಾಗಿರಿ, ಹೂಡಿಕೆ ಮಾಡಿ ಮತ್ತು ಎಲ್ಲರನ್ನು ತಲುಪಿರಿ ಎಂಬುದು ಈ ವರ್ಷದ ವಿಶ್ವ ಕ್ಷಯರೋಗ ದಿನದ ಧ್ಯೇಯವಾಕ್ಯವಾಗಿದೆ. ಕ್ಷಯರೋಗವನ್ನು ಕೊನೆಗೊಳಿಸಲು ಸ್ಥಳೀಯ, ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ನಡೆಯುತ್ತಿರುವ ಪ್ರಯತ್ನಗಳನ್ನು ಪ್ರತಿಬಿಂಬಿಸಲು ಮತ್ತು ಬಲವಾದ ಬದ್ಧತೆಯನ್ನು ಪ್ರೋತ್ಸಾಹಿಸಲು ಈ ದಿನ ಒಂದು ಅವಕಾಶವಾಗಿದೆ. ಎಲ್ಲಾ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಕ್ಷಯವನ್ನು ನಿರ್ಮೂಲನೆ ಮಾಡಲು ಕೇಂದ್ರ ಸರ್ಕಾರ ಹಲವಾರು ಉಪಕ್ರಮಗಳನ್ನು ತೆಗೆದುಕೊಂಡಿದೆ. ಕ್ಷಯ ಪ್ರಕರಣದ ಸಾವಿನ ಪ್ರಮಾಣ ತಗ್ಗಿಸಲು ಮತ್ತು ಹೊಸ ಪ್ರಕರಣಗಳನ್ನು ತಡೆಗಟ್ಟಲು ೩೩ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಗುರುತಿಸಲಾದ ಆದ್ಯತೆಯ ಜಿಲ್ಲೆಗಳಲ್ಲಿ ೧೦೦ ದಿನಗಳ ಕ್ಷಯರೋಗ ನಿರ್ಮೂಲನಾ ಅಭಿಯಾನವನ್ನು ನಡೆಸಲಾಗಿದೆ. ವಿಶ್ವ ಆರೋಗ್ಯ ಸಂಸ್ಥೆಯ ೨೦೨೪ ರ ಜಾಗತಿಕ ಕ್ಷಯರೋಗ ವರದಿಯ ಪ್ರಕಾರ, ಭಾರತದಲ್ಲಿ ಕ್ಷಯರೋಗದ ಪ್ರಮಾಣ ಶೇಕಡಾ ೧೭.೭ ರಷ್ಟು ಇಳಿಮುಖವಾಗಿದೆ. ವಿಶ್ವ ಕ್ಷಯರೋಗ ದಿನವಾದ ಇಂದು ಜನರು ಕ್ಷಯರೋಗದ ನಿರ್ಮೂಲನೆ ಎಡೆಗೆ ತಮ್ಮ ಬದ್ಧತೆಯನ್ನು ಪುನರುಚ್ಚರಿಸಲು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜೆ.ಪಿ. ನಡ್ಡಾ ಕರೆ ನೀಡಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಟಿಬಿ ನಿರ್ಮೂಲನೆಗೆ ಸರ್ಕಾರ ಕೈಗೊಂಡಿರುವ ಹಲವು ಕ್ರಮಗಳ ಬಗ್ಗೆ ವಿವರ ನೀಡಿದ್ದು, ನಿ-ಕ್ಷಯ ಪೋಷಣ್ ಯೋಜನೆ, ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಅಭಿಯಾನದಡಿಯಲ್ಲಿ ರೋಗಿಗಳಿಗೆ ಆರ್ಥಿಕ ಬೆಂಬಲವಾಗಿ

ಸರ್ಕಾರ ಪ್ರತಿ ತಿಂಗಳಿಗೆ ನೀಡುತ್ತಿದ್ದ ೫೦೦ ರೂಪಾಯಿಯನ್ನು ಒಂದು ಸಾವಿರ ರೂಪಾಯಿಗೆ ಏರಿಸಲಾಗಿದೆ ಎಂದಿದ್ದಾರೆ. ಇದೇ ವೇಳೆ ಅವರು, ಕ್ಷಯರೋಗಿಗಳಿಗೆ ಉತ್ತಮ ಸೇವೆಗಳನ್ನು ಒದಗಿಸುತ್ತಿರುವುದು ಎಲ್ಲ ಆರೋಗ್ಯ ಕಾರ್ಯಕರ್ತರಿಗೆ ಕೃತಜ್ಞತೆ ಸಲ್ಲಿಸಿದ್ದು, ನಾಗರಿಕರು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಿದ್ದಲ್ಲಿ ಟಿಬಿ ಮುಕ್ತ ಭಾರತ ರಚಿಸಲು ಸಾಧ್ಯ ಎಂದು ಹೇಳಿದ್ದಾರೆ.

<><*<><>*><>

ದೆಹಲಿ ಹೈಕೋರ್ಟ್ ನ್ಯಾಯಮೂರ್ತಿ ಯಶವಂತ ವರ್ಮ ಅವರ ನಿವಾಸದಲ್ಲಿ ನಗದು ಪತ್ತೆ ಪ್ರಕರಣಕ್ಕೆ ಸಂಬಂಧಿಸಿದಂತೆ ಇಂದು ರಾಜ್ಯಸಭೆಯ ಸಭಾಪತಿ ಹಾಗೂ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಸಭಾ ನಾಯಕ ಜೆ.ಪಿ. ನೆಡ್ಡಾ ಮತ್ತು ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ್ ಖರ್ಗೆ ಅವರೊಂದಿಗೆ ಸಭೆ ಕರೆದಿದ್ದಾರೆ. ಕಳೆದ ವಾರ ರಾಜ್ಯಸಭೆಯಲ್ಲಿ ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್ ನಗದು ಪತ್ತೆ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಷಯ ಪ್ರಸ್ತಾಪಿಸಿದ್ದರು.

<><*<><>*><>

೨೦೨೭ರ ಸಿಂಹಾಸ್ಥ ಮಹಾಕುಂಭಮೇಳ ನಡೆಸುವ ನಿಟ್ಟಿನಲ್ಲಿ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರು ನಿನ್ನೆ ನಾಸಿಕ್‌ನಲ್ಲಿ ಸಭೆ ನಡೆಸಿದರು. ಉತ್ತರ ಪ್ರದೇಶದ ಮಾದರಿಯಲ್ಲಿ ಕುಂಭಮೇಳ ಪ್ರಾಧಿಕಾರ ಸ್ಥಾಪಿಸಲು ಮಹಾರಾಷ್ಟ್ರ ಸರ್ಕಾರ ಚಿಂತನೆ ನಡೆಸುತ್ತಿದ್ದು, ಈ ನಿಟ್ಟಿನಲ್ಲಿ ಶೀಘ್ರವೇ ಕಾನೂನುಗಳನ್ನು ಪರಿಚಯಿಸಲಾಗುವುದೆಂದು ತಿಳಿಸಿರುವ ದೇವೇಂದ್ರ ಫಡ್ನವೀಸ್ ಕುಂಭಮೇಳಕ್ಕೆ ಸಂಭಂದಿಸಿದಂತೆ ಕಾನೂನು ಚೌಕಟ್ಟುಗಳನ್ನು ಈಗಿನಿಂದಲೆ ರೂಪಿಸುವುದರಿಂದ ಜನಸಂದಣಿ ನಿರ್ವಹಣೆ ಮಾಡಲು ಅನುಕೂಲವಾಗಲಿದೆ ಎಂದು ಹೇಳಿದ್ದಾರೆ. ತ್ರಯಂಬಕೇಶ್ವರ ದೇವಾಲಯದ ಸಂಕೀರ್ಣ ಅಭಿವೃದ್ಧಿಗೆ ಯೋಜನೆಗಳನ್ನು ರೂಪಿಸುತ್ತಿದ್ದು, ಸಿಂಹಸ್ಥ ಕುಂಭಮೇಳಕ್ಕೆ ಸಂಭಂದಿಸಿದಂತೆ ತ್ರಯಬಂಕೇಶ್ವರ ದೇಗುಲದ ಮೊದಲ ಹಂತದ ಅಭಿವೃದ್ಧಿ ಕಾರ್ಯಗಳನ್ನು ತ್ವರಿತವಾಗಿ ಪೂರ್ಣಗೊಳಿಸಲಾಗುವುದು ಎಂದು ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಮಾಹಿತಿ ನೀಡಿದರು. ಸಭೆಯಲ್ಲಿ ವಿವಿಧ ಸಚಿವರು, ಶಾಸಕರು ಹಾಗೂ ಜಿಲ್ಲಾ ಪರಿಷತ್ ಆಡಳಿತ ಮುಖ್ಯಸ್ಥರು, ಕಾರ್ಯನಿರ್ವಹಕ ಅಧಿಕಾರಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

<><*<><>*><>

ಮುಂಬೈನಲ್ಲಿರುವ ತಮ್ಮ ನಿವಾಸದಲ್ಲಿ ಅನುಮಾನಸ್ಪದ ರೀತಿಯಲ್ಲಿ ಸಾವನ್ನಪ್ಪಿದ್ದ ಬಾಲಿವುಡ್ ನಟ ಸುಶಾಂತ್ ಸಿಂಗ್ ಸಾವಿನ ಪ್ರಕರಣವನ್ನು ಕೇಂದ್ರೀಯ ತನಿಖಾ ಸಂಸ್ಥೆ - ಸಿಬಿಐ ೪ಕ್ಕೂ ಹೆಚ್ಚು

ವರ್ಷಗಳ ಬಳಿಕ ಅಂತ್ಯಗೊಳಿಸಿದೆ. ಸುಶಾಂತ್ ಸಿಂಗ್ ಕುಟುಂಬ ಸದಸ್ಯರು ಶಂಕಿಸಿದಂತೆ ಅವರ ಸಾವಿನಲ್ಲಿ ಯಾವುದೇ ಅನುಮಾನಸ್ಪದ ಘಟನೆ ನಡೆದಿಲ್ಲ ಎಂದು ಸಿಬಿಐ ತಿಳಿಸಿದೆ.

<><*<><>*><>

ಇಂದು ಆಂಧ್ರಪ್ರದೇಶದ ವಿಶಾಖಪಟ್ಟಣಂನಲ್ಲಿ ನಡೆಯಲಿರುವ ಇಂಡಿಯನ್ ಪ್ರಿಮಿಯರ್ ಲೀಗ್ ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಲಖನೌ ಸೂಪರ್ ಜೈಂಟ್ಸ್ ಮುಖಾಮುಖಿಯಾಗಲಿದೆ. ಪಂದ್ಯ ಸಂಜೆ ೭.೩೦ ಕ್ಕೆ ಆರಂಭವಾಗಲಿದೆ. ಚೆನ್ನೈನ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ತಂಡ ಮುಂಬೈ ಇಂಡಿಯನ್ಸ್ ವಿರುದ್ಧ ೪ ವಿಕೆಟ್‌ಗಳ ಜಯ ದಾಖಲಿಸಿದೆ. ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಮುಂಬೈ ಇಂಡಿಯನ್ಸ್ ನಿಗದಿತ ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೫೫ ರನ್ ಗಳಿಸಿತು. ಪ್ರತ್ಯುತ್ತರವಾಗಿ ಚೆನ್ನೈ ತಂಡ ೧೯.೧ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೫೮ ರನ್ ಗಳಿಸಿ ಗೆಲುವಿನ ನಗೆ ಬೀರಿತು. ಅತ್ಯುತ್ತಮ ಬೌಲಿಂಗ್ ಪ್ರದರ್ಶನಕ್ಕಾಗಿ ೪ ವಿಕೆಟ್ ಪಡೆದ ಚೆನ್ನೈನ ನೂರ್‌ಅಹ್ಮದ್ ಪಂದ್ಯ ಶ್ರೇಷ್ಠ ಪ್ರಶಸ್ತಿ ಪಡೆದರು.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೨.೩೦ ಕ್ಕೆ <>*><>